**ಮಾನ್ಯ ವಿಧಾನ ಪರಿಷತ್ತಿನ ಶಾಸಕರುಗಳಾದ ಶ್ರೀ ಪ್ರದೀಪ್ ಶೆಟ್ಟರ್ ಮತ್ತು ಡಾ.ಧನಂಜಯ ಸರ್ಜಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ.**

**ಪ್ರಸ್ತಾವ:-**

"ಔಷಧ ವಹಿವಾಟು, ದೇಶದಲ್ಲಿ ಕರ್ನಾಟಕಕ್ಕೆ ಮೂರನೇ ಸ್ಥಾನ, ಜನಮನ ಗೆದ್ದ ಜನೌಷಧ' ಎನ್ನುವ ಅಡಿಬರಹದ ಪತ್ರಿಕಾ ವರದಿಯು ಪ್ರಧಾನ ಮಂತ್ರಿ ಜನೌಷಧ ಕೇಂದ್ರಗಳು ರಾಜ್ಯದ ಜನರಿಗೆ ಯಾವ ರೀತಿ ಅನುಕೂಲವಾಗುತ್ತಿದೆ ಎನ್ನುವುದನ್ನು ಸ್ಪಷ್ಟವಾಗಿ ತೋರಿಸುತ್ತಿದೆ.

ದೇಶದಲ್ಲಿ 16,900 ಜನೌಷಧಿ ಕೇಂದ್ರಗಳಿದ್ದು, ಕರ್ನಾಟಕ ರಾಜ್ಯದಲ್ಲಿ 1,417 ಜನೌಷಧ ಕೇಂದ್ರಗಳಿವೆ ಈ ಪೈಕಿ 184 ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿವೆ. ಔಷಧಗಳ ಖರೀದಿಯಲ್ಲಿ ಕರ್ನಾಟಕ ದೇಶದಲ್ಲೇ 3 ಸ್ಥಾನದಲ್ಲಿದೆ. ಮಾಸಿಕವಾಗಿ ಕರ್ನಾಟಕ ರಾಜ್ಯದಲ್ಲಿ 25-27 ಕೋಟಿ ರೂ. ನಷ್ಟು ವಹಿವಾಟು ಆಗುತ್ತಿದ್ದರೆ, ವಾರ್ಷಿಕವಾಗಿ ಅಂದಾಜು 200 ರಿಂದ 250 ಕೋಟಿ ರೂ ವಹಿವಾಟು ಆಗುತ್ತಿದೆ.

ಖಾಸಗಿ ಔಷಧ ಅಂಗಡಿಗಳು ಮಾರಾಟ ಮಾಡುವ ಬ್ರಾಂಡೆಡ್ ಔಷಧಗಳ ಬೆಲೆಗೆ ಹೋಲಿಸಿದರೆ ಜನೌಷಧಿ ಕೇಂದ್ರಗಳಲ್ಲಿ ಔಷಧಗಳ ಬೆಲೆ ಸರಾಸರಿ 4ರಿಂದ 5 ಪಟ್ಟು ರಿಯಾಯಿತಿ ದರದಲ್ಲಿದೆ. ಬ್ರಾಂಡೆಡ್ ಔಷಧಗಳಿಗೆ 100ರೂ. ಖರ್ಚಾಗುವುದಾದರೆ, ಜನೌಷಧ ಕೇಂದ್ರದಲ್ಲಿ ಅದೇ ಔಷಧ 10-20 ರೂ. ಗೆ ಲಭ್ಯವಾಗುತ್ತಿದೆ. ಹೀಗಾಗಿಯೇ ಕಡಿಮೆ ಅವಧಿಯಲ್ಲಿಯೇ 'ಜನೌಷಧ' ಮೆಚ್ಚುಗೆಗೆ ಪಾತ್ರವಾಗಿದೆ. ಸರ್ಕಾರವೆ ಬಿಡುಗಡೆ ಮಾಡಿರುವ ವರದಿಯಂತೆ, ಖರೀದಿಯಲ್ಲಿ ಸಾರ್ವಜನಿಕರ ಆರ್ಥಿಕ ಪೋಲು ತಡೆಯುವ ಮೂಲಕ ಇಲ್ಲಿಯವರೆಗೆ ಭಾರತ ದೇಶದಲ್ಲಿ ಸಾರ್ವಜನಿಕರ 40 ಸಾವಿರ ಕೋಟಿ ರೂ ಉಳಿತಾಯವಾಗಿದ್ದರೆ, 2025 2026 ರಲ್ಲಿ (ಅಕ್ಟೋಬರ್ 31, 2025ರವರೆಗೆ) ಸಾರ್ವಜನಿಕರ 4.980.59 ಕೋಟಿ ರೂ ಉಳಿತಾಯವಾಗಿದೆ.

ಪ್ರಸ್ತುತ ನೋವು ನಿವಾರಕಗಳು ಮತ್ತು ಜ್ವರ ನಿವಾರಕಗಳು, ಆಂಟಿಬಯೋಟಿಕ್ಸ್ ಮಧುಮೇಹ ಔಷಧಗಳು, ಹೃದಯ ರಕ್ತನಾಳದ ಔಷಧ, ಹೃದಯ ಸಂಬಂಧಿ ಔಷಧ ಸೇರಿದಂತೆ ಸುಮಾರು 1800 ಜೆನರಿಕ್ ಔಷಧಗಳು ಮತ್ತು 300 ಶಸ್ತ್ರಚಿಕಿತ್ಸಾ ಸಲಕರಣೆಗಳು ಲಭ್ಯವಾಗುತ್ತಿವೆ. ರಾಜ್ಯದಲ್ಲಿರುವ ಜನೌಷಧ ಕೇಂದ್ರಗಳ ಪೈಕಿ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿರುವ 184 ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸಲು ರಾಜ್ಯ ಸರ್ಕಾರ 2025 ರ ಮೇ ತಿಂಗಳಿನಲ್ಲಿ ಆದೇಶಿಸಿತ್ತು. ಅದನ್ನು ಧಾರವಾಡ ಹೈಕೋರ್ಟ್ - ರದ್ದುಗೊಳಿಸಿದೆ. ರಾಜ್ಯ ಸರ್ಕಾರದ ಆಸ್ಪತ್ರೆಗಳ ಮೆಡಿಕಲ್‌ಗಳಲ್ಲಿ ಉಚಿತವಾಗಿ ಔಷಧಗಳನ್ನು ನೀಡುತ್ತಿದ್ದೇವೆ ಎಂದು ಸರ್ಕಾರ ಹೇಳುತ್ತದೆ. ಆದರೆ, ಈಗಲೂ ಹಲವು ಸರ್ಕಾರಿ ಆಸ್ಪತ್ರೆಗಳಲ್ಲಿ ಅನೇಕ ಔಷಧಗಳು ಲಭ್ಯವಿಲ್ಲ. ಅನಿವಾರ್ಯವಾಗಿ ಬಡ ರೋಗಿಗಳು ಖಾಸಗಿ ಮೆಡಿಕಲ್‌ಗಳತ್ತ ಮುಖ ಮಾಡುವ ಸ್ಥಿತಿ ಇದೆ. ಅಂತಹವರಿಗೆ ಜನೌಷಧ – ಅನುಕೂಲವಾಗಲಿವೆ.

ಕೇಂದ್ರ ಸರ್ಕಾರ ಜನರ ಕಲ್ಯಾಣಕ್ಕಾಗಿಯೇ ಜನೌಷಧಿ ಯೋಜನೆ ಜಾರಿಗೆ ತಂದಿರುವುದು. ಕೇಂದ್ರ ಸರ್ಕಾರದಿಂದ ಸಿಗುವ ಜನಕಲ್ಯಾಣ ಯೋಜನೆಗಳು ಬಡವರಿಗೆ ತಲುಪಬೇಕು ಈ ನಿಟ್ಟಿನಲ್ಲಿ ಜನೌಷಧಿ ಕೇಂದ್ರಗಳನ್ನು ಕೂಡಲೇ ತೆರೆಯಲು ಆದೇಶ ಹೊರಡಿಸಬೇಕೆಂದು ಹಾಗೂ ರಾಜ್ಯ ಸರಕಾರ ತನ್ನ ಮೊಂಡುತನವನ್ನು ಬಿಟ್ಟು ಒಂದು ಜನಪರ ಯೋಜನೆಗೆ ಸಹಕರಿಸಿ, ರಾಜ್ಯ ಸರ್ಕಾರ ಸರಕಾರಿ ಆಸ್ಪತ್ರೆಗಳ ಆವರಣದಲ್ಲಿ ಜನ ಔಷಧಿ ಮಳಿಗೆಗಳನ್ನು ತೆರೆಯಲು ಅನುಮತಿ ನೀಡಿ ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಅನುಕೂಲ ಮಾಡಿ ಕೊಡಲು ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ.

**ಹೇಳಿಕೆ:**

ಜನೌಷಧಿ ಕೇಂದ್ರಗಳೊಂದಿಗೆ ಮಾಡಿಕೊಂಡ ಒಪ್ಪಂದ ಅನ್ವಯವೇ ಸರ್ಕಾರಿ ಆಸ್ಪತ್ರೆಗಳ ಆವರಣದೊಳಗಿರುವ ಜನೌಷಧಿ ಕೇಂದ್ರಗಳನ್ನು ಸರ್ಕಾರದ ಆದೇಶ ಸಂಖ್ಯೆ ಆಕುಕ 173 ಪಿಟಿಡಿ 2025, ದಿನಾಂಕ: 14.05.2025 ಪ್ರಕಾರ ಕ್ರಮ ಕೈಗೊಳ್ಳಲಾಗಿದೆ (ಲಗತ್ತಿಸಿದೆ).

. . . 2

ಈ ಮೇಲಿನ ಆದೇಶ ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ಇರುವ ಜನೌಷಧಿ ಕೇಂದ್ರಗಳಿಗೆ ಮಾತ್ರ ಅನ್ವಯಿಸುತ್ತದೆ. ಸರ್ಕಾರಿ ಆಸ್ಪತ್ರೆ ಆವರಣದ ಹೊರಗೆ ಇರುವ ಆಸ್ಪತ್ರೆಗಳಿಗೆ ಇದು ಅನ್ವಯವಾಗುವುದಿಲ್ಲ. ಮುಂದುವರೆದು, ಎಂ.ಎಸ್.ಐ.ಎಲ್ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವಂತೆ ಕ್ರಮ ವಹಿಸಲಾಗಿದೆ (ಪ್ರತಿಯನ್ನು ಲಗತ್ತಿಸಿದೆ).

ಜನೌಷಧಿ ಕೇಂದ್ರಗಳ ಮುಂದುವರೆಯುವಿಕೆ ಘನ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ (W.P .No: 105933/2025 Main case).

ಸಂಖ್ಯೆ:ಆಕುಕ 470 ಪಿಟಿಡಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

E-10079946
16/5/25

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಜನೌಷಧಿ ಕೇಂದ್ರಗಳನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಆಕುಕ 161 ಹೆಚ್ ಪಿಸಿ 2016, ದಿನಾಂಕ:29.09.2016.
2. ಸರ್ಕಾರದ ಆದೇಶ ಸಂಖ್ಯೆ: ಆಕುಕ 164 ಹೆಚ್‌ಪಿಸಿ 2016, ದಿನಾಂಕ:01.10.2016.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಏಕಕಡತ ಸಂಖ್ಯೆ: HFWS-17014/148/2023.

ಆರೋಗ್ಯ ಮತ್ತು ... ನಿರ್ದೇಶಕರ ಕಚೇರಿ "ಆರೋಗ್ಯ ಸೌಧ", ಬೆಂಗಳೂರು-23.
ದಿನಾಂಕ:
ಸಂಖ್ಯೆ: 289
17/05/25

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ(1) ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಆಸ್ಪತ್ರೆ, ಹಾಗೂ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಸುಮಾರು 200 ಜನೌಷಧಿ ಮಳಿಗೆಗಳನ್ನು ಸ್ಥಾಪಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (2) ರಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿನ ವೈದ್ಯರುಗಳು ಬ್ರ್ಯಾಂಡೆಡ್ ಔಷಧಿಗಳನ್ನು ರೋಗಿಗಳಿಗೆ ಸಲಹಾ ಚೀಟಿ (Prescription) ರೂಪದಲ್ಲಿ ನೀಡುವುದನ್ನು ನಿಷೇಧಿಸಲಾಗಿದೆ ಹಾಗೂ ಆರೋಗ್ಯ ಸಂಸ್ಥೆಗಳಲ್ಲಿ ಲಭ್ಯವಿರದ ಔಷಧಿಗಳನ್ನು ಸಂಬಂಧಿಸಿದ ವೈದ್ಯರುಗಳು, ರೋಗಿಗಳಿಗೆ ನೀಡುವ ಸಲಹಾ ಚೀಟಿ (Prescription) ಗಳನ್ನು Generic ಹೆಸರಿನಲ್ಲಿ ಬರೆಯಲು ಕಡ್ಡಾಯವಾಗಿ ಸೂಚಿಸಿದೆ. ಈ ಔಷಧಿಗಳನ್ನು ಆರೋಗ್ಯ ಸಂಸ್ಥೆಯ ಆವರಣದಲ್ಲಿ ಸ್ಥಾಪಿಸಿರುವ ಜನೌಷಧಿ ಮಳಿಗೆಯಲ್ಲಿ ಕಡಿಮೆ ದರದಲ್ಲಿ ಔಷಧಿ ಸಿಗುವ ಬಗ್ಗೆ ರೋಗಿಗಳಿಗೆ ವಿವರಿಸಿ ಅಲ್ಲಿಂದ ಆ ಔಷಧಿಗಳನ್ನು ಖರೀದಿಸಲು ಸಲಹೆ ನೀಡುವಂತೆ ಸಹ ಸೂಚಿಸಿದೆ ಹಾಗೂ ಜನರಿಕ್ ಔಷಧಿಗಳು, ಬ್ರ್ಯಾಂಡೆಡ್ ಔಷಧಿಯಷ್ಟೇ ಉತ್ತಮ ಗುಣಮಟ್ಟ, ರೋಗನಿವಾರಕ ಸಾಮರ್ಥ್ಯ ಹೊಂದಿರುತ್ತದೆ ಎಂದು ರೋಗಿಗಳಿಗೆ ಶಿಕ್ಷಣ ಹಾಗೂ ಪ್ರಚಾರದ ಮೂಲಕ ಜಾಗೃತಿ ಮೂಡಿಸುವುದು ಮತ್ತು ಜನರಿಕ್ ಔಷಧಿಗಳನ್ನು ಈ ಒಂದು ಸದುದ್ದೇಶಕ್ಕಾಗಿ ತೆರೆದಿರುವ ಜನೌಷಧಿ ಮಳಿಗೆಗಳ ಮೂಲಕವೇ ಖರೀದಿಸಲು ಜನಸಾಮಾನ್ಯರಿಗೆ ಉತ್ತೇಜನದ ಮುಖಾಂತರ ತಿಳುವಳಿಕೆ ನೀಡಲು ಆದೇಶಿಸಿದೆ.

ಮೇಲೆ ಓದಲಾದ ಕ್ರ.ಸಂ (3)ರ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಏಕಕಡತದಲ್ಲಿ ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪ್ರಸ್ತುತ 207 ಜನೌಷಧಿ ಕೇಂದ್ರಗಳಿಗೆ ಅನುಮತಿ ನೀಡಲಾಗಿರುತ್ತದೆ. ಅರ್ಜಿದಾರರು ಜನೌಷಧಿ ಕೇಂದ್ರಗಳ ಸ್ಥಾಪನೆಗೆ ಸಲ್ಲಿಸಿದ ಅರ್ಜಿಯನ್ನು ARS ಮುಂದೆ ಮಂಡಿಸಿ ಅದರ ಅನುಮೋದನೆಯ ನಂತರ ಆಯುಕ್ತರ ಮುಖಾಂತರ ಸರ್ಕಾರಕ್ಕೆ ಸಲ್ಲಿಸಿ, ಸರ್ಕಾರದಿಂದ ಅನುಮೋದನೆ ಆದ ನಂತರ ಅರ್ಜಿದಾರರಿಗೆ ಅನುಮತಿ ನೀಡಲಾಗುತ್ತದೆ. ಆದುದರಿಂದ, ಜನೌಷಧಿ ಕೇಂದ್ರಗಳನ್ನು ಪ್ರಾರಂಭಿಸುವ ನೀತಿಗೆ ಸಂಬಂಧಿಸಿದಂತೆ ಸಮಗ್ರವಾಗಿ ಪರಿಶೀಲಿಸುವ ಅಗತ್ಯವಿರುತ್ತದೆ.

ಪ್ರಸ್ತುತ ಜನೌಷಧಿ ಕೇಂದ್ರಗಳ ಸ್ಥಾಪನೆಗೆ 31 ಅರ್ಜಿಗಳು ಆಯುಕ್ತರ ಹಂತದಲ್ಲಿ ಬಾಕಿ ಇರುತ್ತವೆ. ಸದರಿ ಜನೌಷಧಿ ಕೇಂದ್ರಗಳ ಸ್ಥಾಪನೆಗೆ ಸಂಬಂಧಿಸಿದ ಈಗಿನ ನೀತಿಯು, ಕಾರ್ಯವಿಧಾನಕ್ಕೆ ಸಂಬಂಧಿಸಿದಂತೆ ಹಳೆಯದಾಗಿದೆ. ಈ ಹಿನ್ನಲೆಯಲ್ಲಿ ಪಾಲಿಸಿಯನ್ನು ಮರುಪರಿಶೀಲಿಸುವುದು ಅಗತ್ಯವಿರುತ್ತದೆ. ಆದುದರಿಂದ ಆಯುಕ್ತಾಲಯದಲ್ಲಿ ಸ್ವೀಕೃತವಾಗಿರುವ ಅರ್ಜಿಗಳ ಬಗ್ಗೆ ಕ್ರಮ ಕೈಗೊಳ್ಳುವ ಕುರಿತು ನಿರ್ದೇಶನ ಕೋರಿರುತ್ತಾರೆ.

ವಿಭಾಗ:- JD (M)
ಕ್ರಮ – ಸಾಧಾರಣ / ತುರ್ತು

19/5/25

Scanned with OKEN Scanner

ಪ್ರಸ್ತುತ ಆಸ್ಪತ್ರೆಗಳು ರೋಗಿಗಳಿಗೆ ಯಾವುದೇ ಔಷಧಿಗಳನ್ನು ಹೊರಗಿನಿಂದ ಖರೀದಿಸಲು ಶಿಫಾರಸ್ಸನ್ನು ಮಾಡದಂತೆ ನೋಡಿಕೊಳ್ಳುವುದು ಸರ್ಕಾರ ನೀತಿಯಾಗಿದೆ. ಈ ಹಿನ್ನೆಲೆಯಲ್ಲಿ ಆಸ್ಪತ್ರೆ ಆವರಣದೊಳಗೆ ಜನಔಷಧಿ ಕೇಂದ್ರಗಳನ್ನು ತೆರೆಯುವುದು ಸರ್ಕಾರದ ನೀತಿಗೆ ವ್ಯತಿರಿಕ್ತವಾಗುತ್ತದೆ.

ಭಾರತದ ಬಿ.ಪಿ.ಪಿ.ಐ ಬ್ಯೂರೋ ಆಫ್ ಫಾರ್ಮ ಈ ಜನೌಷಧಿ ಕೇಂದ್ರಗಳಿಗೆ ನೋಡಲ್ ಕೇಂದ್ರ ಸಂಸ್ಥೆಯಾಗಿದ್ದು, ಈ ಕೇಂದ್ರಗಳಿಂದ ಖರೀದಿಸುವ ಔಷಧಿಗಳಿಗೆ ವಿಶೇಷ ರಿಯಾಯ್ತಿಯನ್ನು ಒದಗಿಸುತ್ತದೆ.

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 173 ಪಿಟಿಡಿ 2025, ಬೆಂಗಳೂರು,**
**ದಿನಾಂಕ: 14.05.2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಇನ್ನು ಮುಂದೆ ಜನೌಷಧಿ ಕೇಂದ್ರಗಳ ಹಂಚಿಕೆಯನ್ನು ಸ್ಥಗಿತಗೊಳಿಸಲು ಮತ್ತು ಅದಕ್ಕೆ ಅನುಗುಣವಾಗಿ ಜನೌಷಧಿ ಕೇಂದ್ರಗಳ ಪ್ರಾರಂಭಕ್ಕಾಗಿ ಆಯುಕ್ತಾಲಯದಲ್ಲಿ ಅನುಮೋದನೆಗಾಗಿ ಬಾಕಿ ಇರುವ 31 ಅರ್ಜಿಗಳನ್ನು ತಿರಸ್ಕರಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಆದಾಗ್ಯೂ, ಸರ್ಕಾರಿ ಆಸ್ಪತ್ರೆಗಳ ಹೊರಗೆ ಜನೌಷಧಿ ಕೇಂದ್ರಗಳ ಸ್ಥಾಪನೆಯು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರದ ಕಾರಣ ಮುಂದುವರಿಯಬಹುದಾಗಿದೆ.

ಮುಂದುವರೆದು,ಪ್ರಸ್ತುತ ಇಲಾಖೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಅಸ್ತಿತ್ವದಲ್ಲಿರುವ ಜನೌಷದಿ ಕೇಂದ್ರಗಳನ್ನು ಅವರೊಂದಿಗೆ ಮಾಡಿಕೊಂಡಿರುವ ಒಪ್ಪಂದ ನಿಯಮಗಳ (MOU) ಪ್ರಕಾರ ಸ್ಥಗಿತಗೊಳಿಸಲು ಅಗತ್ಯ ಕ್ರಮವಹಿಸತಕ್ಕದ್ದು.

ಹಾಗೆಯೇ, ಜೆನೆರಿಕ್ ಔಷಧಿಗಳ ಖರೀದಿಗೆ ಬಿ.ಪಿ.ಪಿ.ಐ ಯೊಂದಿಗೆ ಕೆ.ಎಸ್.ಎಂ.ಎಸ್.ಸಿ.ಎಲ್ ರವರು ವಿಶೇಷ ದರಗಳನ್ನು ರೂಪಿಸಲು ಸೂಚಿಸಿದೆ. ಪರ್ಯಾಯವಾಗಿ, ಆಸ್ಪತ್ರೆಗಳು ಬಿ.ಪಿ.ಪಿ.ಐ (BPPI) ಯಿಂದ ಔಷಧಿಗಳನ್ನು ಖರೀದಿಸಿ ರೋಗಿಗಳಿಗೆ ಉಚಿತವಾಗಿ ವಿತರಿಸಲು ಕ್ರಮವಹಿಸಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

14/5
(ಶ್ರೀಪತಿ ಪಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

**ಇವರಿಗೆ:-**

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದ ವೃತ್ತ, ಬೆಂಗಳೂರು.



Scanned with OKEN Scanner

2. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದ ವೃತ್ತ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸ್ಟೇಟ್ ಡ್ರಗ್ಸ್ ಅಂಡ್ ಲಾಜಿಸ್ಟಿಕ್ಸ್ ವೇರ್ ಹೌಸಿಂಗ್ ಸೊಸೈಟಿ, ನಂ.1, ಡಾ. ಸಿದ್ದಯ್ಯ ಪುರಾಣಿಕ್ ರಸ್ತೆ, ಕೆ.ಹೆಚ್.ಬಿ. ಕಾಲೋನಿ, ಮಾಗಡಿ ರಸ್ತೆ, ಬೆಂಗಳೂರು-79.
5. ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ, ಅರಮನೆ ರಸ್ತೆ, ಬೆಂಗಳೂರು.
6. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಮತ್ತು ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು (ನಿರ್ದೇಶಕರ ಮುಖಾಂತರ).
7. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:-

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರ ಅಪರ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.



Scanned with OKEN Scanner

MSIL ಮೈಸೂರ್ ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್
Mysore Sales International Limited
(A Government of Karnataka Undertaking)

ಸಂಖ್ಯೆ: ಎಂ.ಎಸ್.ಐ.ಎಲ್/ವ್ಯನಿ/16 /2025-26
ದಿನಾಂಕ: 6/8/2025

ಆಯುಕ್ತರು
ಆರೋಗ್ಯ ಮತ್ತುಕುಟುಂಬ ಕಲ್ಯಾಣ ಇಲಾಖೆ
ಆರೋಗ್ಯ ಸೌಧ, 5 ನೇ ಮಹಡಿ, ಮಾಗಡಿ ರಸ್ತೆ, ಬೆಂಗಳೂರು-23

ಮಾನ್ಯರೆ

**ವಿಷಯ:** ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಎಂ.ಎಸ್.ಐ.ಎಲ್ ನಡೆಸುತ್ತಿರುವ ಪ್ರಧಾನಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳನ್ನು ಮುಚ್ಚಲು ಕಾಲಾವಕಾಶ ನೀಡುವ ಬಗ್ಗೆ.

**ಉಲ್ಲೇಖ:** ಆರೋಗ್ಯ ಇಲಾಖೆಯು ಆದೇಶ ಸಂಖ್ಯೆ: HFW 173 PTD 2025 Bangalore dated: 14.05.2025

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರವು ಉಲ್ಲೇಖಿತ ಆದೇಶದನ್ವಯ ಸಾರ್ವಜನಿಕ ಆಸ್ಪತ್ರೆಗಳ ಆವರಣದಲ್ಲಿರುವ ಜನೌಷಧಿ ಕೇಂದ್ರಗಳನ್ನು ತೆರವುಗೊಳಿಸಲು ಆದೇಶಿಸಿದೆ.

ಅದರಂತೆ ಮೈಸೂರ್ ಸೇಲ್ಸ್ ಇಂಟರ್ ನ್ಯಾಷನಲ್ ಲಿ ಸಂಸ್ಥೆಯು ಸಹ ಸಾರ್ವಜನಿಕ ಆಸ್ಪತ್ರೆಗಳ ಆವರಣದಲ್ಲಿರುವ ಜನೌಷಧಿ ಕೇಂದ್ರಗಳನ್ನು ಕ್ರಮ ವಹಿಸಿದೆ.

ಕರ್ನಾಟಕ ರಾಜ್ಯದ ಸಾರ್ವಜನಿಕ ಆಸ್ಪತ್ರೆಗಳ ಆವರಣದಲ್ಲಿ ಎಂ.ಎಸ್. ಐ.ಎಲ್ ಒಡೆತನದ ಒಟ್ಟು 89 ಮಳಿಗೆಗಳನ್ನು ಸ್ಥಾಪಿಸಲಾಗಿದ್ದು ಸರ್ಕಾರದ ಆದೇಶದಂತೆ 31/7/2025 ರ ವರೆಗೆ ಒಟ್ಟು 28 ಮಳಿಗೆಗಳನ್ನು ಮುಚ್ಚಲಾಗಿದೆ. ಉಳಿದ 61 ಮುಚ್ಚುವ ಹಂತದಲ್ಲಿವೆ.

ಆದರೆ ಈ ಎಲ್ಲಾ ಈ ಜನೌಷದಿ ಮಳಿಗೆಯನ್ನು ಏಕ ಕಾಲದಲ್ಲಿ ತೆರವು ಗೊಳಿಸಿದಲ್ಲಿ ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಫಾರ್ಮಿಸಿಸ್ಟ್ ನಿರುದ್ಯೋಗಿಯಾಗುತ್ತಾರೆ. ಇವರನ್ನು ಅವಲಂಬಿಸಿರುವ ಕುಟುಂಬ ನಿರ್ವಹಣೆ ಕಷ್ಟಕರವಾಗುತ್ತದೆ. ಮಳಿಗೆಯಲ್ಲಿರುವ ಔಷಧದ ದಾಸ್ತಾನಿನಿಂದ ನಷ್ಟವಾಗುತ್ತದೆ. ಆದ್ದರಿಂದ ಉಳಿದ 61 ಮಳಿಗೆಗಳನ್ನು ಹಂತ ಹಂತವಾಗಿ 31/12/2025 ರೊಳಗಾಗಿ ಮುಚ್ಚಲಾಗುವುದು.

ಆದ್ದರಿಂದ ಈ ಮಳಿಗೆಗಳನ್ನು ದಿನಾಂಕ 31/12/2025 ರ ವರೆಗೆ ಮುಂದುವರೆಸಲು ಅವಕಾಶ ನೀಡಲು ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳ ಆಡಳಿತಾಧಿಕಾರಿಗಳಿಗೆ ನಿರ್ದೇಶನ ನೀಡಲು ಕೋರಿದೆ.

ತಮ್ಮ ವಿಶ್ವಾಸಿ

ವ್ಯವಸ್ಥಾಪಕ ನಿರ್ದೇಶಕರು.



Scanned with OKEN Scanner

Back

**Case Information**

**Status:** Disposed

| | | |
|---|---|---|
| Case Number: WP 105933/2025 (KAHC020173972025) | Classification: GM RES | Date of Filing: 13/08/2025 16:01:05 |
| Petitioner: JAGADEESHA MOGER | Petitioner Advocate: ANIRUDH A KULKARNI | |
| Respondent: STATE OF KARNATAKA | Respondent Advocate: | |
| Filing No.: WP 106394/2025 | Judge: M.NAGAPRASANNA | |
| Last Posted For: FRESH MATTER/S | Date of Decision: 10/12/2025 | Last Action Taken: ALLOWED |
| Next Hearing Date: 10/12/2025 | | |

**Prayer Information**

**Prayer Details: WP 105933/2025**

THIS WP IS FILED PRAYING TO,

WHEREFORE, IT IS MOST RESPECTFULLY PRAYED THAT THIS HON BLE COURT BE GRACIOUSLY PLEASE TO.

A) ISSUE A WRIT OF CERTIORARI OR ANY OTHER APPROPRIATE WRIT, ORDER OR DIRECTION QUASHING THE IMPUGNED GOVERNMENT ORDER BEARING NO AA.KU.KA 173 PTD 2025 DATED 14.05.2025 AT ANNEXURE-A AT PAGE NOS.27 TO 29 AS BEING ARBITRARY, DISCRIMINATIVE AND VIOLATIVE OF PRINCIPLES OF NATURAL JUSTICE, AND FUNDAMENTAL RIGHTS GUARANTEED UNDER THE CONSTITUTION OF INDIA, 1950 AND THE LAW LAID DOWN BY HON BLE SUPREME COURT OF INDIA.

B) ISSUE A WRIT OF CERTIORARI OR ANY OTHER APPROPRIATE WRIT, ORDER OR DIRECTION QUASHING THE IMPUGNED OFFICE ORDER BEARING NO THA AA BHA/224/2025-26